ಅ. ವಿಶ್ವ ಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿಯಲ್ಲಿ ರಾಜ್ಯದ ಬೆಂಗಳೂರು, ಮೈಸೂರು ಮತ್ತು ಬೆಳಗಾಂ ಕಂದಾಯ ವಿಭಾಗಗಳಲ್ಲಿಯ 200 ಹಾಗೂ ಗುಲ್ಬರ್ಗ ವಿಭಾಗದಲ್ಲಿಯ 4 ದ್ವಿತೀಯ ಹಂತದ ಆಸ್ಪತ್ರೆಗಳ ನವೀಕರಣ ಹಾಗೂ ವಿಸ್ತರಣೆ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ. ಈಗಾಗಲೇ 140 ಆಸ್ಪತ್ರೆ ಕಾಮಗಾರಿಗಳು ಪೂರ್ಣಗೊಂಡಿದ್ದು ಬಾಕಿ ಉಳಿದಿರುವ ಆಸ್ಪತ್ರೆ ಕಾಮಗಾರಿಗಳನ್ನು ಯೋಜನಾ ಅವಧಿಯೊಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ಆ. ಜರ್ಮನ್ ನೆರವಿನ ಕೆಎಫ್‌ಡಬ್ಲ್ಯೂ ಯೋಜನೆಯ 2ನೆಯ ಹಂತದಲ್ಲಿ ಕೊಪ್ಪಳದ ಸಾರ್ವಜನಿಕ ಆಸ್ಪತ್ರೆಯನ್ನು ಜಿಲ್ಲಾ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿದೆ.

ಇ. ಹೌದು. ಮೇಲೆ ತಿಳಿಸಿರುವಂತೆ ಹಾಲಿ ಇರುವ ಸಾರ್ವಜನಿಕ ಆಸ್ಪತ್ರೆಯನ್ನು ಜಿಲ್ಲಾ ಆಸ್ಪತ್ರೆಯಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಿದ್ದು ಆಗಸ್ಟ್ 2001ರಂದು ಬೆಂಗಳೂರಿಗೆ ಬರುವ ಕೆಎಫ್‌ಡಬ್ಲ್ಯೂ ಸಲಹೆಗಾರರೊಂದಿಗೆ (ಸಮಾಲೋಚಕರು) ಈ ಬಗ್ಗೆ ವಿವರವಾಗಿ ಚರ್ಚಿಸಿ ಮುಂದಿನ ಕ್ರಮಕೈಗೊಳ್ಳಲಾಗುವುದು.

ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ವಹಣೆಯನ್ನು ವಹಿಸಿಕೊಡುವುದು.

1827(1811)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ವಹಣೆಯನ್ನು ವಹಿಸಿಕೊಡಲಾಗುವುದೆಂಬ ಸಂಗತಿ ನಿಜವೇ?

ಆ) ಹಾಗಿದ್ದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ವಹಿಸಿಕೊಡಬೇಕೆಂದು ಸರ್ಕಾರ ತೀರ್ಮಾನಿಸಿದೆ?

ಇ) ಪ್ರತಿಯೊಂದು ವೈದ್ಯಕೀಯ ಕಾಲೇಜುಗಳಿಗೆ ಯಾವ ಯಾವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ವಹಿಸಿಕೊಡಬೇಕೆಂದು ಸರ್ಕಾರ ತೀರ್ಮಾನಿಸಿದೆ? (ವಿವರ

ನೀಡುವುದು)

ಡಾ: ಎ. ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು.

ಆ ಮತ್ತು ಇ) ಇನ್ನೂ ತೀರ್ಮಾನಿಸಿರುವುದಿಲ್ಲ.

ಕರ್ನಾಟಕದ 10 ವೈದ್ಯ ಕಾಲೇಜುಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ನಿರಾಕರಣೆ.

1829(1813)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ): ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕದ 10 ವೈದ್ಯ ಕಾಲೇಜುಗಳಿಗೆ ಪುನರ್ ಒಪ್ಪಿಗೆ ನೀಡದೇ ಇರುವುದರಿಂದ ಪ್ರವೇಶಕ್ಕೆ ಅನುಮತಿ ನಿರಾಕರಣೆ ಆಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಮಾನ್ಯತೆ ನಿರಾಕರಿಸಿದ ವೈದ್ಯ ಹಾಗೂ ದಂತ ವೈದ್ಯ ಕಾಲೇಜುಗಳು ಯಾವುವು? ಅವುಗಳ ಹೆಸರು ಹಾಗೂ ಪೂರ್ಣವಾದ ವಿವರ ನೀಡುವುದು?

ಇ) ಈ ಕಾಲೇಜುಗಳ ಪ್ರವೇಶ ನಿರಾಕರಿಸಲು ಕಾರಣಗಳೇನು?

ಈ) ಈ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪುನಃ ಪ್ರವೇಶ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಉ) ಪ್ರವೇಶಕ್ಕೆ ಅನುಮತಿ ನಿರಾಕರಿಸಿದಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ದೊರಕದಂತಾಗುವುದು?

ಶ್ರೀಮತಿ ನಫೀಸ್ ಫಜಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು):

ಅ) ಒಂದು ವೈದ್ಯಕೀಯ ವಿದ್ಯಾಲಯಕ್ಕೆ ಮಾತ್ರ 2001-02ನೇ ಸಾಲಿಗೆ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ಕೇಂದ್ರ ಸರ್ಕಾರವು ಅನುಮತಿ ನೀಡಿರುವುದಿಲ್ಲ.

ಆ) ಮಾನ್ಯತೆ ಪಡೆಯದೇ ಇರುವ ವೈದ್ಯ ಹಾಗೂ ದಂತ ಕಾಲೇಜುಗಳ ವಿವರ ಈ